ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು

*ಸಂಖ್ಯೆ : ಸಿ5(2)ಮುಂಬಡ್ತಿ-06/2015-16* ದಿನಾಂಕ : 08/10/2015

**ಅಧಿಸೂಚನೆ**

ವಿಷಯ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧೀಕ್ಷಕರುಗಳಿಗೆ ಪತ್ರಾಂಕಿತ ವ್ಯವಸ್ಥಾಪಕರು ಹಾಗೂ ತತ್ಸಮಾನ ವೃಂದದ ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡುವ ಕುರಿತು.

ಉಲ್ಲೇಖ :- ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದ: 29-01-2008.

2 :- ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಜಿಇ 2008 ದಿ : 06-01-2009.

3 :- ದಿನಾಂಕ : 27/09/2015 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

4:- ದಿನಾಂಕ: 08/10/2015 ರಂದು ನಡೆದ ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಅರ್ಹ ಅಧೀಕ್ಷಕರು ಭಾಗವಹಿಸಿ, ಸ್ಥಳ ಆಯ್ಕೆ ಮಾಡಿಕೊಂಡಿರುವಂತೆ.

* * * * * * *

**ಪ್ರಸ್ತಾವನೆ :**

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಗ್ರೂಪ್ 'ಬಿ' ವೃಂದದ ಪತ್ರಾಂಕಿತ ವ್ಯವಸ್ಥಾಪಕರು ಹಾಗೂ ತತ್ಸಮಾನ ವೃಂದದ ಹುದ್ದೆಗಳಿಗೆ ಉಲ್ಲೇಖಿತ (1) ರ ಸರ್ಕಾರದ ಆದೇಶದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರನ್ನು ನೇಮಕಾತಿ ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಬಡ್ತಿಯನ್ನು ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ಉಲ್ಲೇಖಿತ (2) ರ ಸರ್ಕಾರದ ಆದೇಶದಲ್ಲಿ ರಚಿಸಿ ಆದೇಶಿಸಲಾಗಿದೆ. ಅದರಂತೆ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಪತ್ರಾಂಕಿತ ವ್ಯವಸ್ಥಾಪಕರು ಹಾಗೂ ತತ್ಸಮಾನ ವೃಂದದ ಹುದ್ದೆಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಅಧೀಕ್ಷಕರ ಹುದ್ದೆಯಿಂದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ : 27/09/2015 ರಂದು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಇಲಾಖಾ ಮುಂಬಡ್ತಿಯ ಸಭೆಯನ್ನು ನಡೆಸಲಾಯಿತು.

ಬಡ್ತಿಗಾಗಿ ಅರ್ಹರಿರುವ ಅಧೀಕ್ಷಕರುಗಳಿಗೆ ಅವರೇ ಸ್ವತಃ ಸ್ಥಳಗಳನ್ನು ಆಯ್ಕೆ ಮಾಡಿಕೊಳ್ಳುವ ಸಲುವಾಗಿ ದಿನಾಂಕ : 08/10/2015 ರಂದು ಸ್ಥಳ ಆಯ್ಕೆ ಪ್ರಕ್ರಿಯೆಯನ್ನು ನಡೆಸಲಾಗಿ ಅರ್ಹ ಅಧೀಕ್ಷಕರುಗಳು ಸ್ಥಳಗಳನ್ನು ಆಯ್ಕೆ ಮಾಡಿಕೊಂಡಿದ್ದು, ಅವರುಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಸ್ಥಳನಿಯುಕ್ತಿಗೊಳಿಸುವ ಸಲುವಾಗಿ ಈ ಕೆಳಕಂಡ ಆದೇಶ.

**ಆದೇಶ :-**

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ 'ಸಿ' ವೃಂದದ ವೇತನ ಶ್ರೇಣಿ ರೂ. 20000-36300 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಅಧೀಕ್ಷಕರುಗಳಿಗೆ ಗ್ರೂಪ್ 'ಬಿ' ವೃಂದದ ವೇತನ ಶ್ರೇಣಿ ರೂ. 21600-40050 ರ ಪತ್ರಾಂಕಿತ ವ್ಯವಸ್ಥಾಕರು ಹಾಗೂ ತತ್ಸಮಾನ ವೃಂದದ ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಅವರುಗಳ ಹೆಸರಿನ ಮುಂದೆ ಸೂಚಿಸಲಾಗಿರುವ ಹುದ್ದೆ ಮತ್ತು ಸ್ಥಳಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆವಿಗೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಲಾಗಿದೆ.

| ಕ್ರಮ ಸಂಖ್ಯೆ | ಜ್ಯೇಷ್ಠತಾ ಸಂಖ್ಯೆ | ಅಧೀಕ್ಷಕರ ಹೆಸರು ಮತ್ತು ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯ ಹೆಸರು ಮತ್ತು ವಿಳಾಸ ಶ್ರೀಮತಿ / ಶ್ರೀ | ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು ಹುದ್ದೆಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಹುದ್ದೆ ಮತ್ತು ಕಛೇರಿಯ ವಿಳಾಸ |
|---|---|---|---|
| 1 | 98 | ಪಿ.ಎಸ್. ನಾಗಮಣಿ, ಅಧೀಕ್ಷಕರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ನೆಲಮಂಗಲ, ಬೆಂಗಳೂರು ಗ್ರಾಮಾಂತರ ಜಿಲ್ಲೆ. (ಶ್ರೀ ಕೃಷ್ಣಪ್ಪ ಇವರ ನಿವೃತ್ತಿಯಿಂದ ತೆರವಾದ ಹುದ್ದೆ) |
| 2 | 103 | ಜಿ. ಮಂಜುನಾಥ, ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ, ಬೆಂಗಳೂರು ದಕ್ಷಿಣ ಜಿಲ್ಲೆ, ಬೆಂಗಳೂರು | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ (ಶ್ರೀಮತಿ ಶಾಲಿನಿ ವೀಣಾ ಕುಮಾರಿ ಇವರ ನಿಯೋಜನೆಯಿಂದ ತೆರವಾದ ಹುದ್ದೆ) |
| 3 | 110 | ಎಸ್. ಸತೀಶ್, ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಧುಗಿರಿ ಶೈಕ್ಷಣಿಕ ಜಿಲ್ಲೆ, ಮಧುಗಿರಿ. | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ (ಕೆ. ಶ್ರೀರಂಗಯ್ಯ, ಇವರ ಬಡ್ತಿಯಿಂದ ತೆರವಾದ ಹುದ್ದೆ) |
| 4 | 113 | ಗಂಗಾಧರೇಶ್. ಆರ್. ಅಧೀಕ್ಷಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಉತ್ತರ ವಲಯ, ಮಂಡ್ಯ ತಾಲ್ಲೂಕು ಮತ್ತು ಜಿಲ್ಲೆ (ಎಂ. ಬೋರೇಗೌಡ, ಇವರ ಬಡ್ತಿಯಿಂದ ತಎರವಾದ ಹುದ್ದೆಗೆ) |
| 5 | 124 | ಎ.ಎಸ್. ಧನಂಜಯ ಮೂರ್ತಿ. ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿಕ್ಕಮಗಳೂರು | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಕಡೂರು ತಾಲ್ಲೂಕು & ಚಿಕ್ಕಮಗಳೂರು ಜಿಲ್ಲೆ (ಶ್ರೀ ಬಿ. ಶಿವಮೂರ್ತಪ್ಪ ಇವರ ವರ್ಗಾವಣೆಯಿಂದ ತೆರವಾದ ಹುದ್ದೆ) |
| 6 | 129 | ಕೆ.ಎನ್. ರವೀಂದ್ರನಾಥ್, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ದಕ್ಷಿಣ ವಲಯ-3, ಬಿ.ಟಿ.ಎಂ. ಲೇಔಟ್, ಬೆಂಗಳೂರು | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಗೌರಿಬಿದನೂರು ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ (ಶ್ರೀ ವೆಂಕೋಬರಾವ್ ಇವರ ವರ್ಗಾವಣೆಯಿಂದ ತೆರವಾದ ಹುದ್ದೆ) |
| 7 | 130 | ಆರ್. ಕುಮಾರ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಆಲೂರು, ಹಾಸನ ಜಿಲ್ಲೆ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮಳವಳ್ಳಿ, ಮಂಡ್ಯ ಜಿಲ್ಲೆ (ಶ್ರೀ ಎಂ.ಜಿ. ಜಯಪ್ರಕಾಶ್ ಇವರ ವರ್ಗಾವಣೆಯಿಂದ ತೆರವಾದ ಹುದ್ದೆ) |
| 8 | 132 | ಎಂ.ಹೆಚ್. ಲಕ್ಷ್ಮೀಕಾಂತ, ಅಧೀಕ್ಷಕರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಮಂಡ್ಯ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಕೃಷ್ಣರಾಜಪೇಟೆ ತಾಲ್ಲೂಕು, ಮಂಡ್ಯ ಜಿಲ್ಲೆ (ಶ್ರೀ ವೆಂಕಟರಾಮ್ ಇವರ ವರ್ಗಾವಣೆಯಿಂದ) |

| | | | |
|---|---|---|---|
| 9 | 133 | ಎಸ್. ನಾಗರಾಜು, ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ದಾವಣಗೆರೆ ಜಿಲ್ಲೆ, ದಾವಣಗೆರೆ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ದಾವಣಗೆರೆ ಉತ್ತರ ವಲಯ (ಶ್ರೀ ಎ.ಕೆ. ಶರಣಪ್ಪ ಇವರ ನಿವೃತ್ತಿಯಿಂದ ತೆರವಾದ ಹುದ್ದೆ) |
| 10 | 151 | ಎ. ಮುನಿರಾಜು, ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ, ಬೆಂಗಳೂರು | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಚನ್ನರಾಯಪಟ್ಟಣ, (ಶ್ರೀ ಬಿ.ವಿ. ಚಂದ್ರಶೇಖರ್ ಇವರ ವರ್ಗಾವಣೆಯಿಂದ) |
| 11 | 158 | ಸಿ.ಆರ್. ತಿಮ್ಮಪ್ಪ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಗುಬ್ಬಿ ತುಮಕೂರು ಜಿಲ್ಲೆ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಪಾವಗಡ ತಾಲ್ಲೂಕು, ಮಧುಗಿರಿ ಶೈಕ್ಷಣಿಕ ಜಿಲ್ಲೆ (ಶ್ರೀ ಕೆ.ಆರ್. ತಿಪ್ಪೇಸ್ವಾಮಿ ಇವರ ನಿವೃತ್ತಿಯಿಂದ) |
| 12 | 159 | ಸಿ. ನಾಗರತ್ನಮ್ಮ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಹನೂರು ವಲಯ, ಕೊಳ್ಳೇಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ (ಶ್ರೀ ಶಿವರಾಮಮೂರ್ತಿ, ಇವರ ನಿವೃತ್ತಿಯಿಂದ) |
| 13 | 161 | ಲಕ್ಷ್ಮಿ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಕುಂದಾಪುರ, ಉಡುಪಿ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ (ಶ್ರೀಮತಿ ಕೆ. ತಾರಾಬಾಯಿ, ಇವರ ಬಡ್ತಿಯಿಂದ) |
| 14 | 162 | ಬಿ.ಎಸ್. ರಮೇಶ್, ಅಧೀಕ್ಷಕರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಚಿಕ್ಕಮಗಳೂರು | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ತರೀಕೆರೆ ತಾಲ್ಲೂಕು & ಚಿಕ್ಕಮಗಳೂರು ಜಿಲ್ಲೆ (ಶ್ರೀ ಕೆ.ಡಿ. ವೆಂಕಟೇಗೌಡ ಇವರ ವರ್ಗಾವಣೆಯಿಂದ) |
| 15 | 168 | ಡಿ.ವಿ. ಜಯಪ್ರಕಾಶ್, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ನಾಗಮಂಗಲ, ಮಂಡ್ಯ ಜಿಲ್ಲೆ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಪಿರಿಯಾಪಟ್ಟಣ ತಾಲ್ಲೂಕು, ಮೈಸೂರು ಜಿಲ್ಲೆ (ಶ್ರೀ ಗಣೇಶ್ ಬಾಬು ಇವರ ಬಡ್ತಿಯಿಂದ) |
| 16 | 175 | ಡಿ.ಎಸ್. ನಾಗೇಶ್, ಅಧೀಕ್ಷಕರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಸಕಲೇಶಪುರ, ಹಾಸನ ಜಿಲ್ಲೆ (ಶ್ರೀ ಜಿ.ಬಿ. ರಂಗಸ್ವಾಮಿ ಇವರ ವರ್ಗಾವಣೆಯಿಂದ ತೆರವಾದ ಹುದ್ದೆ) |
| 17 | 224 | ಹೆಚ್.ಎಸ್. ಹುತ್ತೇಶ್, ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ರಾಮನಗರ ಜಿಲ್ಲೆ, ರಾಮನಗರ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಸೋಮವಾರಪೇಟೆ ತಾಲ್ಲೂಕು, ಕೊಡಗು ಜಿಲ್ಲೆ(ಶ್ರೀ ಶ್ರೀಕಂಠಯ್ಯ ಇವರ ನಿವೃತ್ತಿಯಿಂದ) |
| 28 | 225 | ಕೆ.ಜಿ. ಜಯಕಾಂತ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮಳವಳ್ಳಿ ತಾಲ್ಲೂಕು, ಮಂಡ್ಯ ಜಿಲ್ಲೆ, | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮಡಿಕೇರಿ (ಶ್ರೀ ಎನ್. ಗೋಪಾಲಕೃಷ್ಣ ಇವರ ವರ್ಗಾವಣೆಯಿಂದ) |

| | | | |
|---|---|---|---|
| 19 | 234 | ಪಾರ್ಥಸಾರಥಿ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಗೌರಿಬಿದನೂರು, ಚಿಕ್ಕಬಳ್ಳಾಪುರ ಜಿಲ್ಲೆ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಬಾಗೇಪಲ್ಲಿ, ಚಿಕ್ಕಬಳ್ಳಾಪುರ ಜಿಲ್ಲೆ (ಶ್ರೀ ಕೆ.ಎನ್. ನಾಗರಾಜ ಇವರ ವರ್ಗಾವಣೆಯಿಂದ) |

**ಷರತ್ತುಗಳು :-**

1) ಸ್ಥಾನಪನ್ನ ಬಡ್ತಿಯನ್ನು ಹೊಂದಿರುವ ಅಧೀಕ್ಷಕರುಗಳು 10 ದಿನಗಳೊಳಗಾಗಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯಿಂದ ಬಿಡುಗಡೆಯಾಗಿ, ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಸ್ಥಳದಲ್ಲಿ ಕರ್ತವ್ಯಕ್ಕೆ ಹಾಜರಾಗಲು ಈ ಮೂಲಕ ಆದೇಶಿಸಲಾಗಿದೆ.
2) ಈ ಬಡ್ತಿ ಆದೇಶವು ಯಾವುದೇ ಸಂಬಂಧಪಟ್ಟ ಅಧಿಕಾರಿ / ನೌಕರರ ಸೇವಾ ಜೇಷ್ಠತೆ; ಮೀಸಲಾತಿ ಅಥವಾ ಇನ್ನಾವುದೇ ಜೇಷ್ಠತೆ / ಬಡ್ತಿ ನಿಯಮಗಳ ಪರಿಪಾಲನೆಯಲ್ಲಿ ವೈಯುಕ್ತಿಕವಾಗಿ ಉಲಂಘನೆಯಾಗಿದ್ದಲ್ಲಿ ಅಂತಹ ಅಧಿಕಾರಿ / ನೌಕರರ ಬಡ್ತಿ ತಡೆಹಿಡಿಯುವ / ರದ್ದುಪಡಿಸುವ ಷರತ್ತಿಗೆ ಒಳಗೊಂಡಿರುತ್ತದೆ.
3) ನಿಗಧಿಪಡಿಸಿರುವ ಎಲ್ಲಾ ಇಲಾಖಾ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿರುವ ಪ್ರಮಾಣ ಪತ್ರದ ನೈಜತೆಯನ್ನು ಸಂಬಂಧಿಸಿದ ಪ್ರಾಧಿಕಾರಿದಂದ ತಪ್ಪದೇ ಪಡೆದುಕೊಳ್ಳತಕ್ಕದ್ದು.

15/X/15

(ಕೆ.ಎಸ್. ಸತ್ಯಮೂರ್ತಿ)
ಆಯುಕ್ತರು

ಇವರಿಗೆ:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ Ink Signed Copy.
3) ಸಂಬಂಧಿಸಿದ ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರುಗಳಿಗೆ
4) ಸಂಬಂಧಿಸಿದ ಜಿಲ್ಲಾ ಪಂಚಾಯತಿ ಕಾರ್ಯನಿರ್ವಹಣಾಧಿಕಾರಿಗಳಿಗೆ.
5) ಸಂಬಂಧಿಸಿದ ಕಛೇರಿ ಮುಖ್ಯಸ್ಥರಿಗೆ.
6) ಸಂಬಂಧಿಸಿದ ಅಧೀಕ್ಷಕರುಗಳಿಗೆ.
7) ಕಛೇರಿ ಪ್ರತಿ.